**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಹೊಳಲ್ಕೆರೆ.**

**ಸಿ.ಸಿ. 113/2016**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ರಮೇಶ್.ಕೆ.ಟಿ. | ಪ್ರಾ.ಸಾ.8 |
| ತಂದೆಯ/ಗಂಡನ ಹೆಸರು | : | ತಮ್ಮಯ್ಯ | ಚಾ.ಸಾ.12 |
| ವಯಸ್ಸು | : | 42 ವರ್ಷ | |
| ಕೆಲಸ | : | ಪಿ.ಐ., ಹೊಸದುರ್ಗ ಪೊಲೀಸ್ ಠಾಣೆ | ಸಾ ಪ್ರ ಬೋ |
| ವಾಸ | : | ಹೊಸದುರ್ಗ | ದಿಃ17.02.2026 |

**ಮುಖ್ಯ ವಿಚಾರಣೆ : ದಂಡ ಪ್ರಕ್ರಿಯಾ ಸಂಹಿತೆ ಕಲಂ 299 ರ ಅಡಿಯಲ್ಲಿ ಸಾಕ್ಷ್ಯ:**

ನಾನು ದಿನಾಂಕ 28.05.2013 ರಿಂದ 25.09.2013 ರವರೆಗೆ ಹೊಳಲ್ಕೆರೆ ಪೊಲೀಸ್ ಠಾಣೆಯಲ್ಲಿ ಪಿ.ಎಸ್.ಐ. ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿನಾಂಕ 25.08.2013 ರಂದು ಮದ್ಯಾಹ್ನ 1.10 ರ ಸಮಯದಲ್ಲಿ ಠಾಣಾ ಕರ್ತವ್ಯದಲ್ಲಿದ್ದಾಗ, ಚಾಸಾ.1 ರವರು ನೀಡಿದ ಲಿಖಿತ ದೂರನ್ನು ಸ್ವೀಕರಿಸಿಕೊಂಡು ಠಾಣಾ ಮೊಕದ್ದಮೆ ನಂ.615/2013 ರಂತೆ ಪ್ರ.ವ. ವರದಿಯನ್ನು ದಾಖಲಿಸಿಕೊಂಡು ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗೆ ವರದಿ ಮಾಡಿರುತ್ತೇನೆ. ಸಾಕ್ಷಿ ನಿಪಿ.1 ರಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ನಿಪಿ.1(ಬಿ) ಎಂದು ಗುರುತಿಸಲಾಯಿತು. ಪ್ರ.ವ. ವರದಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ನಿಪಿ.8 ಎಂದು, ಸಾಕ್ಷಿಯ ಸಹಿಯನ್ನು ನಿಪಿ.8(ಎ) ಎಂದು ಗುರುತಿಸಲಾಯಿತು. ಅದೇ ದಿನ ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿ ಚಾಸಾ.1 ರವರು ಸ್ಥಳ ತೋರಿಸಿದ ಮೇರೆಗೆ ಚಾಸಾ.2 ಮತ್ತು 3 ರವರ ಸಮಕ್ಷಮ ಸಂಜೆ 4 ರಿಮದ 4.45 ರವರೆಗೆ ಸ್ಥಳ ಪಂಚನಾಮೆಯನ್ನು ಜರುಗಿಸಿರುತ್ತೇನೆ. ಸಾಕ್ಷಿ ನಿಪಿ.2 ರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ನಿಪಿ.2(ಸಿ) ಎಂದು ಗುರುತಿಸಿರುತ್ತೇನೆ. ಸಾಕ್ಷಿದಾರರಾದ ಚಾಸಾ.4 ರಿಂದ 8 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ದಿ.26.08.2013 ರಂದು ಚಾಸಾ.1 ರವರಿಗೆ ಸಂಬಂಧಿಸಿದಂತೆ ವಿವಾಹದ ಆಮಂತ್ರಣ ಪತ್ರಿಕೆ ಮತ್ತು ಛಾಯಾಚಿತ್ರಗಳನ್ನು ಹಾಜರುಪಡಿಸಿದ್ದು ಹಾಗೂ ಅವರ ವಾಸದ ಕುರಿತು ಆಹಾರ ಪಡಿತರ ಚೀಟಿ ಮತ್ತು ಆದಾಯ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅವುಗಳನ್ನು ಸ್ವೀಕರಿಸಿಕೊಂಡು ಕಡತವದಲ್ಲಿ ಅಳವಡಿಸಿಕೊಂಡಿರುತ್ತೇನೆ. ಅದೇ ಸಮಯದಲ್ಲಿ ಚಾಸಾ.9 ಮತ್ತು 10 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ಸಾಕ್ಷಿ ಚಾಸಾ.1 ರವರಿಂದ ಸ್ವೀಕರಿಸಿದ ವಿವಾಹದ ಛಾಯಾಚಿತ್ರಗಳನ್ನು ನೋಡಿ ಗುರುತಿಸಿದ್ದು

ನಿಪಿ.9 ಮತ್ತು 10 ಎಂದು ಗುರುತಿಸಲಾಯಿತು. ಪ್ರಕರಣದ ಕಡತವನ್ನು ಚಾಸಾ.13 ರವರಿಗೆ ವಹಿಸಿಕೊಟ್ಟಿರುತ್ತೇನೆ.

**ಮರುವಿಚಾರಣೆ : ಇಲ್ಲ.**

(ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿಯಿದೆ.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹೊಳಲ್ಕೆರೆ